**Mysuru Mitra**

**Date:** March 26, 2016 **Page No.** 9

**Edition:** Mysuru **Language: Kannada**

# ವಿವಿಗಳು ಡಿಜಿಟಲ್ ಶಿಕ್ಷಣಕ್ಕೆ ಆದ್ಯತೆ ನೀಡಬೇಕು

## ಯೋಜನಾ ಆಯೋಗದ ಮಾಜಿ ಸದಸ್ಯ ಅರುಣ್ ಮೈರಾ ಸಲಹೆ

ಮೈಸೂರು.ಮಾ.25(ವೈಡಿಎಸ್)– ಪ್ರಸ್ತುತ ಇಡೀ ವಿಶ್ವವೇ ಡಿಜಿಟಲ್ ಕಲಿಕೆ ಅವಲಂಭಿಸಿರುವುದರಿಂದ ವಿಶ್ವವಿದ್ಯಾನಿಲಯಗಳು ಡಿಜಿಟಲ್ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಯೋಜನಾ ಆಯೋಗ ಹಾಗೂ ಬೋಸ್ಟನ್ ಕನ್ಸಲ್ಟಿಂಗ್ ಗ್ರೂಪ್‌ನ ಮಾಜಿ ಸದಸ್ಯ ಅರುಣ್ ಮೈರಾ ಅಭಿಪ್ರಾಯ ವ್ಯಕ್ತಪಡಿಸಿದರು.

ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಎಸ್‌ಡಿಎಂ–ಐಎಂಡಿ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ 21ನೇ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ವಿಶ್ವವಿದ್ಯಾನಿಲಯಗಳು ತಮ್ಮ ಸಾಂಪ್ರದಾಯಿಕ ಶಿಕ್ಷಣದ ಜತೆಗೆ ಡಿಜಿಟಲ್ ಕಲಿಕಾ ವಿಧಾನವನ್ನು ಅಳವಡಿಸಿಕೊಂಡರೆ ಭಾರತ ಜಾಗತಿಕವಾಗಿ ತಲೆಯೆತ್ತಿ ನಿಲ್ಲಲು ಸಾಧ್ಯವಾಗುತ್ತದೆ. ಹಾಗಾಗಿ ಡಿಜಿಟಲ್ ಕಲಿಕೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಹೇಳಿದರು. ವಿದ್ಯಾರ್ಥಿ ಜೀವನದಲ್ಲಿ ಕೇವಲ ಪಠ್ಯ–ಪುಸ್ತಕದಲ್ಲಿರುವ ಜ್ಞಾನವನ್ನು ಮಾತ್ರ ಕಲಿಯುತ್ತೇವೆ. ಆದರೆ, ವೃತ್ತಿಗೆ ಸೇರಿದ ನಂತರ ಪ್ರಾಯೋಗಿಕ ಜ್ಞಾನ ಲಭಿಸುತ್ತದೆ. ಹಾಗಾಗಿ ಜೀವನದ ಪ್ರತಿ ನಿಮಿಷವೂ ಹೊಸತನ್ನು ಕಲಿಯಲು ಪ್ರಯತ್ನಿಸುತ್ತಲೇ ಇರಬೇಕು. ಹಾಗಾಗಿ ವಿದ್ಯಾರ್ಥಿ ಜೀವನ ಮುಗಿದ ಮೇಲೂ ಕಲಿಕೆಯನ್ನು ನಿಲ್ಲಿಸದೆ ಮುಂದುವರೆಸಬೇಕು. ನಿರಂತರ ಕಲಿಕೆಯಿಂದ ಹೊಸ ಹೊಸ ಆವಿಷ್ಕಾರಗಳನ್ನು ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಭವಿಷ್ಯದಲ್ಲಿ ಯುವಕರಿಗೆ ಉದ್ಯೋಗವನ್ನು ಸೃಷ್ಟಿಸುವುದು ದೊಡ್ಡ ಸವಾಲಾಗಿದೆ. ಹಾಗಾಗಿ ಸರ್ಕಾರಗಳು ಉದ್ಯೋಗ ಸೃಷ್ಟಿ ಮತ್ತು ಹೊಸ ತಂತ್ರಜ್ಞಾನಗಳ ಬಳಕೆಗೆ ಹೆಚ್ಚು ಒತ್ತು ನೀಡಬೇಕು. ಆಗ ಮಾತ್ರ ಉದ್ಯೋಗದ ಸೃಷ್ಟಿ ಸುಲಭವಾಗುತ್ತದೆ ಎಂದ ಅವರು, ಯುವಕರು ನಮ್ಮ ದೇಶದ ಇತಿಹಾಸವನ್ನು ಮೆಲುಕು ಹಾಕುತ್ತ ದೇಶದ ಶ್ರೀಮಂತ ಪರಂಪರೆಯನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಶ್ರೀ ಧರ್ಮಸ್ಥಳದ ಧರ್ಮಾಧಿಕಾರಿ, ಎಸ್‌ಡಿಎಂ–ಐಎಂಡಿ ಸಂಸ್ಥೆ ಅಧ್ಯಕ್ಷ ಡಾ.ವೀರೇಂದ್ರಹೆಗ್ಗಡೆ ಮಾತನಾಡಿ, ವೃತ್ತಿಯಲ್ಲಿ ಸಾಧನೆ ಮಾಡಬೇಕೆಂದು ಅಡ್ಡದಾರಿ ಹಿಡಿಯುವುದು ಉತ್ತಮ ಬೆಳವಣಿಗೆಯಲ್ಲ. ಹಣ ಸಂಪಾದನೆಗಾಗಿ ಮಾನವೀಯ ಮೌಲ್ಯಗಳನ್ನು ಮಾರಿಕೊಳ್ಳಬಾರದು ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ 170 ಮಂದಿ ವಿದ್ಯಾರ್ಥಿಗಳಿಗೆ ವಾಣಿಜ್ಯ ನಿರ್ವಹಣೆ, ಸ್ನಾತಕೋತ್ತರ ಡಿಪ್ಲೊಮಾ ಪದವಿಯನ್ನು ವಿತರಿಸಲಾಯಿತು. ಕೃತಿ ಶುಕ್ಲಾ, ನೀತೂ ಪ್ರಭಾಕರನ್, ದ್ರೋಣಮ್, ರಾಜು, ಅನುರಾಗ್ ಎಸ್.ಸಾಹಾಪುರ್ ಅವರಿಗೆ ಚಿನ್ನದ ಪದಕ ವಿತರಿಸಲಾಯಿತು.



ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಎಸ್‌ಡಿಎಂ–ಐಎಂಡಿ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ 21ನೇ ಘಟಿಕೋತ್ಸವ ಸಮಾರಂಭದಲ್ಲಿ ಯೋಜನಾ ಆಯೋಗ ಹಾಗೂ ಬೋಸ್ಟನ್ ಕನ್ಸಲ್ಟಿಂಗ್ ಗ್ರೂಪ್‌ನ ಮಾಜಿ ಸದಸ್ಯ ಆರುಣ್ ಮೈರಾ, ಎಸ್‌ಡಿಎಂ–ಐಎಂಡಿ ಸಂಸ್ಥೆ ಅಧ್ಯಕ್ಷ ಡಾ.ವೀರೇಂದ್ರ ಹೆಗ್ಗಡೆ, ನಿರ್ದೇಶಕ ಡಾ.ಪರಶುರಾಮನ್, ವಿದ್ಯಾರ್ಥಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.